# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **: 650 (763)** |
| **ಸದಸ್ಯರ ಹೆಸರು** | **: ಡಾ|| ತಳವಾರ್ ಸಾಬಣ್ಣ<br>(ನಾಮನಿರ್ದೇಶನ ಹೊಂದಿದವರು)** |
| **ಉತ್ತರಿಸಬೇಕಾದ ದಿನಾಂಕ** | **: 26.12.2022** |
| **ಉತ್ತರಿಸುವ ಸಚಿವರು** | **: ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು** |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕರ್ನಾಟಕದ ಗಡಿ ಜಿಲ್ಲೆಗಳಲ್ಲಿನ ಬೆಳಗಾವಿ ಮತ್ತು ಚಿಕ್ಕೋಡಿ ಜಿಲ್ಲೆಗಳ ಜಿಲ್ಲೆಯಲ್ಲಿ ಸರ್ಕಾರಿ ಕನ್ನಡ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ 6 ಸಾವಿರಕ್ಕಿಂತ ಹೆಚ್ಚು ಶಿಕ್ಷಕರ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಬಂದಿದೆ.</td></tr>
<tr><td>ಆ)</td><td>ಬೆಳಗಾವಿ ಜಿಲ್ಲೆಯಲ್ಲಿ ಕನ್ನಡ ಉಳಿಸಬೇಕು ಮತ್ತು ಬೆಳಸಬೇಕು ಎಂದು ಹೋರಾಟ ನಡೆಯುತ್ತಿರುವಾಗ ಸರ್ಕಾರಿ ಕನ್ನಡ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಬಂದಿದೆ.</td></tr>
<tr><td>ಇ)</td><td>ಸರ್ಕಾರಿ ಮರಾಠಿ ಶಾಲೆಗಳಲ್ಲಿ ಕನ್ನಡ ಶಿಕ್ಷಕರ ಕೊರತೆ ಇರುವುದಕ್ಕೆ ಸರ್ಕಾರ ಕೈಗೊಂಡಿರುವ ಕ್ರಮವೇನು;</td><td>ಸರ್ಕಾರಿ ಮರಾಠಿ ಶಾಲೆಗಳಲ್ಲಿ ಕನ್ನಡ ಶಿಕ್ಷಕರ ಕೊರತೆ ನೀಗಿಸುವುದಕ್ಕಾಗಿ ಖಾಲಿ ಇರುವ ಕನ್ನಡ ಶಿಕ್ಷಕರ ಹುದ್ದೆಗಳಿಗೆ ಈ ಕೆಳಗಿನಂತೆ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿರುತ್ತದೆ.
<table>
<tr><th>ಜಿಲ್ಲೆಯ ಹೆಸರು</th><th>ಪ್ರಾಥಮಿಕ</th><th>ಪ್ರೌಢ</th></tr>
<tr><td>ಬೆಳಗಾವಿ</td><td>59</td><td>5</td></tr>
<tr><td>ಚಿಕ್ಕೋಡಿ</td><td>36</td><td>2</td></tr>
</table></td></tr>
<tr><td>ಈ)</td><td>ಮೇಲ್ಕಂಡ ಕಾರಣಕ್ಕಾಗಿ ಕೋವಿಡ್ ಸಂದರ್ಭದಲ್ಲಿ ಹೆಚ್ಚಿನ ಮಕ್ಕಳು ಸರ್ಕಾರಿ ಶಾಲೆಗಳಲ್ಲಿ ಪ್ರವೇಶ ಪಡೆದು ಈಗ ಮತ್ತೆ ಖಾಸಗಿ ಶಾಲೆಗಳಿಗೆ ಮೋರೆ ಹೋಗುತ್ತಿರುವುದು ನಿಜವೇ;</td><td>ಇಲ್ಲ.</td></tr>
<tr><td>ಉ)</td><td>ಗಡಿ ಭಾಗದಲ್ಲಿ ಕನ್ನಡ ಶಾಲೆಗಳು ಇಲ್ಲದ ಕಾರಣ ಮಕ್ಕಳು ಮರಾಠಿ ಶಾಲೆಗಳಿಗೆ ಅನಿವಾರ್ಯವಾಗಿ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?</td><td>ಗಡಿ ಭಾಗದಲ್ಲಿ ಅವಶ್ಯಕತೆ ಅನುಗುಣವಾಗಿ ಕನ್ನಡ ಶಾಲೆಗಳನ್ನು ಪ್ರಾರಂಭಿಸಲಾಗಿದ್ದು, ಕನ್ನಡ ಶಾಲೆಗಳ ಕೊರತೆ ಇರುವುದಿಲ್ಲ.</td></tr>
</table>

**ಸಂಖ್ಯೆ: ಇಪಿ 102 ಪಿಎಂಎ 2022**

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು